## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 248 (397) |
| ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11.12.2024 |
| ಉತ್ತರಿಸುವ ಸಚಿವರು | : | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮದ ಎಲ್ಲಾ ಶಾಲೆಗಳಲ್ಲಿ ಪಠ್ಯೇತರ ಚಟುವಟಿಕೆ ದೈಹಿಕ, ಸಂಗೀತ ಶಿಕ್ಷಕರ ಹುದ್ದೆ ಮಂಜೂರು ಮಾಡದೇ ಇರುವುದು ಸರ್ಕಾರದ ಗಮನದಲ್ಲಿದೆಯೇ; ಹಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಜರುಗಿಸುವುದೇ; (ವಿವರ ಒದಗಿಸುವುದು) | ಸರ್ಕಾರದ ಆದೇಶ ಸಂಖ್ಯೆ: MWD 402 MDS 2022, ದಿನಾಂಕ:26.08.2022ರಲ್ಲಿ 2017-18ನೇ ಸಾಲಿಗೆ ಮಂಜೂರಾದ 100 ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ "ಅತಿ ಹೆಚ್ಚು ವಿದ್ಯಾರ್ಥಿಗಳ ಸಂಖ್ಯೆ ಹೊಂದಿರುವ 60 ಶಾಲೆಗಳಿಗೆ ಒಬ್ಬ ದೈಹಿಕ ಶಿಕ್ಷಕರನ್ನು ಅತಿಥಿ ಶಿಕ್ಷಕರಾಗಿ ಪಡೆಯಲು ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ ಹಾಗೂ ಇನ್ನುಳಿದ ಶಾಲೆಗಳಿಗೂ ಕೂಡ ದೈಹಿಕ ಶಿಕ್ಷಕರ ಹುದ್ದೆಗಳನ್ನು ಅವಶ್ಯಕತೆಗೆ ಅನುಗುಣವಾಗಿ ಮಂಜೂರಾತಿ ಮಾಡಲು ಕ್ರಮವಹಿಸಲಾಗುವುದು. |
| ಆ) | ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಇರುವಂತೆ ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆಗಳಲ್ಲಿ ಒಂದು ಗುಮಾಸ್ತ ಹಾಗೂ ಒಂದು "ಡಿ" ಗುಂಪು ನೌಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ; ಮಂಜೂರು ಮಾಡದೇ ಇದ್ದಲ್ಲಿ, ಸದರಿ ಶಾಲೆಗಳಲ್ಲಿ ಆ ಕೆಲಸವನ್ನು ನಿರ್ವಹಿಸುವ ಸಿಬ್ಬಂದಿಗಳು ಯಾರು; ಇದರಿಂದ ಶಾಲೆಯಲ್ಲಿ ಸುಗಮವಾಗಿ ಕಾರ್ಯನಿರ್ವಹಿಸಿಕೊಂಡು ಹೋಗಲು ತೊಂದರೆಯಾಗುವುದಿಲ್ಲವೇ; | |
| ಇ) | ಹಾಗಿದ್ದಲ್ಲಿ, ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆಗಳಿಗೆ ದೈಹಿಕ, ಸಂಗೀತ, ಗುಮಾಸ್ತ ಹಾಗೂ ಗ್ರೂಪ್ "ಡಿ" ಹುದ್ದೆಗಳನ್ನು ಸರ್ಕಾರ ಯಾವಾಗ ಮಂಜೂರು ಮಾಡುವುದು? (ವಿವರ ನೀಡುವುದು) | ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆಗಳಲ್ಲಿ ದೈಹಿಕ, ಸಂಗೀತ, ಗುಮಾಸ್ತ ಹಾಗೂ ಗ್ರೂಪ್-ಡಿ ಹುದ್ದೆಗಳನ್ನು ಅವಶ್ಯಕತೆಗೆ ಅನುಗುಣವಾಗಿ ಮಂಜೂರಾತಿ ಮಾಡಲು ಕ್ರಮವಹಿಸಲಾಗುವುದು. |

**ಸಂಖ್ಯೆ: MWD 215 LMQ 2024**

**(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು